# ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ/ಆ-1/161/ಸು/2021

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನ ಸೌಧ,
ಬೆಂಗಳೂರು-560 001, ದಿನಾಂಕ:14.08.2024

## ಸುತ್ತೋಲೆ

ವಿಷಯ: ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ವೃಂದ ಸಂಘಗಳ ವತಿಯಿಂದ ಆಯೋಜಿಸಿರುವ "ಅಭಿನಂದನೆ " ಹಾಗೂ "ಕಾರ್ಯಾಗಾರ"ದಲ್ಲಿ ಭಾಗವಹಿಸಲು ಅಧಿಕಾರಿ/ನೌಕರರುಗಳಿಗೆ ವಿಶೇಷ ಸಾಂದರ್ಭಿಕ ರಜೆ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: 1. ಕರ್ನಾಟಕ ಸರ್ಕಾರದ ಸುತ್ತೋಲೆ ಸಂ:ಸಿಆಸುಇ(ಆಸು):142:ಸ್ಟೀಮರ:2024. ದಿನಾಂಕ:13.08.2024.

2. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಾಮ ನಿರ್ದೇಶಿತ ರಾಜ್ಯ ಪರಿಷತ್ ಸದಸ್ಯರು, ಇವರ ಪತ್ರ ದಿ:14.08.2024.

*****

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ವೃಂದ ಸಂಘಗಳ ವತಿಯಿಂದ ದಿನಾಂಕ:17.08.2024 ರಂದು ಬೆಂಗಳೂರು ನಗರದ ಅರಮನೆ ಆವರಣದಲ್ಲಿ "ಅಭಿನಂದನೆ " ಹಾಗೂ "ಕಾರ್ಯಾಗಾರ" ಆಯೋಜಿಸಲಾಗಿದೆ. ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಛಿಸುವ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರರುಗಳಿಗೆ ಉಲ್ಲೇಖಿತ (1)ರ ಸುತ್ತೋಲೆ ಅನ್ವಯ ದಿನಾಂಕ:17.08.2024ರ ಶನಿವಾರದಂದು ಒಂದು ದಿನದ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಬೇಕೆಂದು ಉಲ್ಲೇಖಿತ ಪತ್ರ(2)ರಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಾಮ ನಿರ್ದೇಶಿತ ರಾಜ್ಯ ಪರಿಷತ್ ಸದಸ್ಯರು ಕೋರಿರುತ್ತಾರೆ.

ಆದುದರಿಂದ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ವೃಂದ ಸಂಘಗಳ ವತಿಯಿಂದ ಆಯೋಜಿಸಿರುವ "ಅಭಿನಂದನೆ " ಹಾಗೂ "ಕಾರ್ಯಾಗಾರ"ದಲ್ಲಿ ಭಾಗವಹಿಸಲು ಇಚ್ಛಿಸುವ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರರುಗಳಿಗೆ ಕಚೇರಿ ಕೆಲಸಕ್ಕೆ ಅಡಚಣೆಯಾಗದಂತೆ ಭಾಗವಹಿಸಲು ಹಾಗೂ ಸದರಿ ಸಂಘದಿಂದ ಪಡೆದ ಅಧಿಕೃತ ಹಾಜರಾತಿ ಪತ್ರವನ್ನು ಒದಗಿಸುವ ಷರತ್ತಿಗೊಳಪಟ್ಟು ದಿನಾಂಕ:17.08.2024ರಂದು ಒಂದು ದಿನದ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲಾಗಿದೆ.

(ಅನಸೂಯಮ್ಮ)
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು

ಗೆ:

ವಿಧಾನ ಪರಿಷತ್ತಿನ ಸಚಿವಾಲಯದ ಎಲ್ಲಾ ಅಧಿಕಾರಿ/ನೌಕರರುಗಳಿಗೆ (ಶಾಸಕರ ಭವನವು ಸೇರಿದಂತೆ)

ಪ್ರತಿಗಳು:

1. ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿಯವರಿಗೆ, ಕವಿಪ.
2. ಕಾರ್ಯದರ್ಶಿ/ಅಪರ ಕಾರ್ಯದರ್ಶಿ/ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರುಗಳಿಗೆ, ಕವಿಪ.
3. ಶ್ರೀಮತಿ ಕೆ. ನೂರ್ ಆಯೇಷಾ ಬಾನು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಾಮ ನಿರ್ದೇಶಿತ ರಾಜ್ಯ ಪರಿಷತ್ ಸದಸ್ಯರು, ಕವಿಪ.
4. ರಕ್ಷಾ ಕಡತಕ್ಕೆ/ಸೂಚನಾ ಫಲಕಕ್ಕೆ/ಬಿಡಿ ಪ್ರತಿಗಳು.